100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವುದು

450 (287) ಶ್ರೀ ಅಭಯ್ ಪಾಟೀಲ್ (ಬೆಳಗಾಂ ದಕ್ಷಿಣ) (ಮಾನ್ಯ ಮುಖ್ಯಮಂತ್ರಿಗಳು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಬೆಳಗಾವಿ ದಕ್ಷಿಣ ಮತಕ್ಷೇತ್ರ ಪ್ರಾಥಮಿಕ ಆರೋಗ್ಯ ಕೇಂದ್ರ ವಡಗಾವಿ ಈ ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಪರಿವರ್ತಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವೈದ್ಯಕೀಯ ಶಿಕ್ಷಣ ಇಲಾಖೆಗೆ ಹಸ್ತಾಂತರಗೊಳಿಸಲು ಆದೇಶವಾಗಿದೆಯೇ; ಹಾಗಿದ್ದಲ್ಲಿ, ಹಸ್ತಾಂತರ ಪ್ರಕ್ರಿಯೆ ಯಾವಾಗ ಆರಂಭವಾಗುವುದು;

(ಆ) 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಅಭಿವೃದ್ಧಿ ಪಡಿಸಲು ಅವಶ್ಯಕವಿರುವ ಅಂದಾಜು ಮೊತ್ತವೆಷ್ಟು;

(ಇ) ಕಾಮಗಾರಿಗೆ ಚಾಲನೆ ಯಾವಾಗ ದೊರೆಯುವುದು?

ಶ್ರೀ ಡಿ.ವಿ. ಸದಾನಂದಗೌಡ: (ಮುಖ್ಯ ಮಂತ್ರಿಗಳು)

(ಅ) ಬೆಳಗಾವಿ ಜಿಲ್ಲೆ ಹಾಗೂ ತಾಲ್ಲೂಕಿನ ವಡಗಾವಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 100 ಹಾಸಿಗೆಗಳ ಜಿಲ್ಲಾ ಆಸ್ಪತ್ರೆಯನ್ನಾಗಿ ಪರಿವರ್ತಿಸಿ ಅಭಿವೃದ್ಧಿಪಡಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವೈದ್ಯಕೀಯ ಶಿಕ್ಷಣ ಇಲಾಖೆಗೆ ಹಸ್ತಾಂತರಿಸಲು ದಿನಾಂಕ: 18/10/2011 ರಲ್ಲಿ ಆದೇಶವಾಗಿದೆ. ಈ ಆಸ್ಪತ್ರೆಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಗೆ ಹಸ್ತಾಂತರಿಸಿಕೊಳ್ಳಲು ದಿನಾಂಕ: 05–11–2011ರಂದು ಸೂಚಿಸಲಾಗಿದೆ. ಪ್ರಸ್ತುತ ಈ ಆಸ್ಪತ್ರೆಯು ಆರೋಗ್ಯ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.

(ಆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಅಂದಾಜು ಮಾಡಿರುವುದಿಲ್ಲ.

(ಇ) ಉದ್ಭವಿಸುವುದಿಲ್ಲ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಿಂದೂ ರುದ್ರಭೂಮಿಗಳ ಬಗ್ಗೆ

451 (416) ಶ್ರೀ ಅಭಯಚಂದ್ರ ಜೈನ್ .ಕೆ. (ಮೂಡಬಿದ್ರೆ) : ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶವ ಸಂಸ್ಕಾರಕ್ಕೆ ಹಿಂದೂ ರುದ್ರಭೂಮಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರ ಹಿಂದೂ ರುದ್ರಭೂಮಿಗಾಗಿ ಜಾಗವನ್ನು ಗೊತ್ತುಪಡಿಸಲು ಯಾವ ಕ್ರಮ ಕೈಗೊಂಡಿದೆ?

ಶ್ರೀ ಡಾ: ವಿ. ಎಸ್. ಆಚಾರ್ಯ: ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

(ಅ) ಹೌದು. ಬಂದಿದೆ.

(ಆ) ದಕ್ಷಿಣ ಕನ್ನಡ ಜಿಲ್ಲೆಯ ಒಟ್ಟು 420 ಗ್ರಾಮಗಳ ಪೈಕಿ 409 ಗ್ರಾಮಗಳಿಗೆ ರುದ್ರ ಭೂಮಿಯ ಸೌಲಭ್ಯ ಕಲ್ಪಿಸಲಾಗಿದೆ. ಬಾಕಿ ಉಳಿದಿರುವ 11 ಗ್ರಾಮಗಳಲ್ಲಿ ರುದ್ರಭೂಮಿ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ತಹಶೀಲ್ದಾರ್‌ಗಳಿಗೆ ಸೂಚನೆ ನೀಡಲಾಗಿದೆ.

ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

452 (751) ಶ್ರೀ ಆನಂದ್ ಸಿಂಗ್ (ವಿಜಯನಗರ–ಬಳ್ಳಾರಿ) : ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

(ಅ) ಹೊಸಪೇಟೆ ತಾಲ್ಲೂಕಿನಲ್ಲಿ 100 ಹಾಸಿಗೆಯ ಆಸ್ಪತ್ರೆಯನ್ನು ಹೆಚ್ಚುವರಿ 150 ಹಾಸಿಗೆಯ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಯಾವಾಗ ಮೇಲ್ದರ್ಜೆಗೇರಿಸಲಾಗುವುದು;

(ಇ) ಹಾಲಿ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಯೂನಿಟ್ ಕಾರ್ಯನಿರ್ವಹಿಸುತ್ತಿದ್ದು, ಸಿಬ್ಬಂದಿ ಕೊರತೆಯಿಂದ ರೋಗಿಗಳಿಗೆ ತೊಂದರೆಯಾಗುತ್ತಿದ್ದು ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ ಡಿ.ವಿ. ಸದಾನಂದಗೌಡ: (ಮುಖ್ಯ ಮಂತ್ರಿಗಳು)

(ಅ) ಹೊಸಪೇಟೆ ತಾಲ್ಲೂಕಿನಲ್ಲಿರುವ 100 ಹಾಸಿಗೆಯ ಆಸ್ಪತ್ರೆಯನ್ನು 150 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸ್ವೀಕೃತವಾಗಿದೆ.